# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ ಎ<br>Part – IV A | ಬೆಂಗಳೂರು, ಮಂಗಳವಾರ, ೨೦, ಅಕ್ಟೋಬರ್, ೨೦೨೦ ( ಆಶ್ವಯುಜ , ೨೮, ಶಕವರ್ಷ ೧೯೪೨)<br>BENGALURU, TUESDAY, 20, OCTOBER, 2020 ( ASHWAYUJA, 28, SHAKAVARSHA, 1942) | ನಂ. ೪೮೯<br>No. 489 |
|---|---|---|


**DEPARTMENT OF PARLIAMENTARY AFFAIRS AND LEGISLATION SECRETARIAT**

**NOTIFICATION**

**NO: DPAL 36 SHASANA 2020, BENGALURU, DATED:20.10.2020**

The Karnataka Town and Country Planning (Second Amendment) Bill, 2020 ಇದಕ್ಕೆ 2020ರ ಅಕ್ಟೋಬರ್ ತಿಂಗಳ 19ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 47 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

## KARNATAKA ACT NO. 47 OF 2020

(First published in the Karnataka Gazette Extra-ordinary on the 20th day of October, 2020)

## THE KARNATAKA TOWN AND COUNTRY PLANNING (SECOND AMENDMENT) ACT, 2020

(Received the assent of the Governor on the 19th day of October, 2020)

An Act further to amend the Karnataka Town and Country Planning Act, 1961.

Whereas it is expedient further to amend the Karnataka Town and Country Planning Act, 1961 (Karnataka Act 11 of 1963) for the purposes hereinafter appearing:

Be it enacted by the Karnataka State Legislature in the seventy first year of the Republic of India, as follows:-

**1. Short title and commencement.-** (1) This Act may be called the Karnataka Town and Country Planning (Second Amendment) Act, 2020.

(2) It shall come into force at once.

**2. Amendment of section 6.-** In the Karnataka Town and Country Planning Act, 1961 (Karnataka Act 11 of 1963) (hereinafter referred to as the principal Act), in section 6,

(1)after the words "under its jurisdiction", the words "Separate present land use map for the local authority jurisdictions in the local planning area and for the wards within the local authority jurisdictions." shall be inserted.

(2) after the words "office of the planning authority", the words "and in the offices of the local authorities and the ward offices." shall be inserted.

**3. Amendment of section 7.-** In section 7 of the principal Act, in sub-section (1), after the words "office of the planning authority", the words "and in the offices of the local authorities and the ward offices." shall be inserted.

**4. Amendment of section 12.-** In section 12 of the principal Act, in sub-section (1), after clause (a), the following shall be inserted, namely:-

"(aa) Present land use maps and proposed land use map prepared for the local planning area, local authority jurisdiction and for every ward within the local authority boundaries."

**5. Amendment of section 13.-** In section 13 of the principal Act, in sub-section (1), the following shall be inserted at the end, namely:-

"Simultaneously, the plan and reports shall be forwarded to the local authorities within the local planning area, which shall, within sixty days from the date of receipt thereof, forward to the Planning Authority, its approval or any observations to be considered by the Authority, failing which the approval of the local authority shall be deemed to have been given."

By Order and in the name of
the Governor of Karnataka,

**(K. DWARAKANATH BABU)**
Secretary to Government
Department of Parliamentary Affairs
and Legislation

## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 36 ಶಾಸನ 2020, ಬೆಂಗಳೂರು, ದಿನಾಂಕ:20.10.2020.**

The Karnataka Town and Country Planning (Second Amendment) Bill, 2020 ಇದಕ್ಕೆ 2020ರ ಅಕ್ಟೋಬರ್ ತಿಂಗಳ 19ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 47 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

### 2020 ರ ಕರ್ನಾಟಕ ಅಧಿನಿಯಮ ಸಂಖ್ಯೆ: 47

(2020 ರ ಅಕ್ಟೋಬರ್ ತಿಂಗಳ 20ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

### ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ಎರಡನೇ ತಿದ್ದುಪಡಿ) ಅಧಿನಿಯಮ, 2020

(2020 ರ ಅಕ್ಟೋಬರ್ ತಿಂಗಳ 19ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961ನ್ನು (1963ರ ಕರ್ನಾಟಕ ಅಧಿನಿಯಮ 11) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ಎರಡನೇ ತಿದ್ದುಪಡಿ) ಅಧಿನಿಯಮ, 2020 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 6ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961ರ (1963ರ ಕರ್ನಾಟಕ ಅಧಿನಿಯಮ 11) (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 6ನೇ ಪ್ರಕರಣದಲ್ಲಿ,-

(1) "ಸದ್ಯದ ಭೂಬಳಕೆಯನ್ನು" ಎಂಬ ಪದಗಳ ತರುವಾಯ "ಸ್ಥಳೀಯ ಯೋಜನಾ ಪ್ರದೇಶದಲ್ಲಿ ಸ್ಥಳೀಯ ಪ್ರಾಧಿಕಾರದ ಅಧಿಕಾರವ್ಯಾಪ್ತಿಗಳಿಗಾಗಿ ಹಾಗೂ ಸ್ಥಳೀಯ ಪ್ರಾಧಿಕಾರದ ಅಧಿಕಾರ ವ್ಯಾಪ್ತಿಗಳೊಳಗಿನ ವಾರ್ಡುಗಳಿಗಾಗಿ ಪ್ರತ್ಯೇಕ ಸದ್ಯದ ಭೂಬಳಕೆ ನಕಾಶೆ" ಎಂಬ ಪದಗಳನ್ನು ಸೇರಿಸತಕ್ಕದ್ದು.

(2) "ಯೋಜನಾ ಪ್ರಾಧಿಕಾರದ ಕಚೇರಿಯಲ್ಲಿ" ಎಂಬ ಪದಗಳ ತರುವಾಯ "ಹಾಗೂ ಸ್ಥಳೀಯ ಪ್ರಾಧಿಕಾರಗಳ ಕಚೇರಿಗಳಲ್ಲಿ ಮತ್ತು ವಾರ್ಡ್ ಕಚೇರಿಗಳಲ್ಲಿ" ಎಂಬ ಪದಗಳನ್ನು ಸೇರಿಸತಕ್ಕದ್ದು.

**3. 7ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 7ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ "ಯೋಜನಾ ಪ್ರಾಧಿಕಾರದ ಕಚೇರಿಯಲ್ಲಿ" ಎಂಬ ಪದಗಳ ತರುವಾಯ "ಹಾಗೂ ಸ್ಥಳೀಯ ಪ್ರಾಧಿಕಾರಗಳ ಕಚೇರಿಗಳಲ್ಲಿ ಮತ್ತು ವಾರ್ಡ್ ಕಚೇರಿಗಳಲ್ಲಿ" ಎಂಬ ಪದಗಳನ್ನು ಸೇರಿಸತಕ್ಕದ್ದು.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



**4. 12ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 12ನೇ ಪ್ರಕರಣದ (1)ನೇ ಉಪಪ್ರಕರಣದ (ಎ) ಖಂಡದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(ಎಎ) ಸ್ಥಳೀಯ ಯೋಜನಾ ಪ್ರದೇಶ, ಸ್ಥಳೀಯ ಪ್ರಾಧಿಕಾರದ ಅಧಿಕಾರ ವ್ಯಾಪ್ತಿಗಾಗಿ ಮತ್ತು ಸ್ಥಳೀಯ ಪ್ರಾಧಿಕಾರದ ಸರಹದ್ದುಗಳೊಳಗಿನ ಪ್ರತಿಯೊಂದು ವಾರ್ಡಿಗಾಗಿ ಸಿದ್ಧಪಡಿಸಿದ ಸದ್ಯದ ಭೂಬಳಕೆ ನಕಾಶೆಗಳು ಮತ್ತು ಪ್ರಸ್ತಾವಿತ ಭೂಬಳಕೆ ನಕಾಶೆ;"

**5. 13ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 13ನೇ ಪ್ರಕರಣದ (1)ನೇ ಉಪಪ್ರಕರಣದ ಕೊನೆಯಲ್ಲಿ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"ಏಕಕಾಲದಲ್ಲಿ, ಯೋಜನೆ ಮತ್ತು ವರದಿಗಳನ್ನು ಸ್ಥಳೀಯ ಯೋಜನಾ ಪ್ರದೇಶದೊಳಗಿನ ಸ್ಥಳೀಯ ಪ್ರಾಧಿಕಾರಗಳಿಗೆ ರವಾನಿಸತಕ್ಕದ್ದು, ಅದರ ಸ್ವೀಕೃತಿಯ ದಿನಾಂಕದಿಂದ ಅರವತ್ತು ದಿನಗಳೊಳಗಾಗಿ ಯೋಜನಾ ಪ್ರಾಧಿಕಾರಕ್ಕೆ ಅನುಮೋದನೆಗಾಗಿ ಅಥವಾ ಪ್ರಾಧಿಕಾರವು ಪರಿಗಣಿಸಬೇಕಾದ ಯಾವುದೇ ಅವಲೋಕನಗಳಿಗಾಗಿ ಕಳುಹಿಸತಕ್ಕದ್ದು, ತಪ್ಪಿದಲ್ಲಿ ಸ್ಥಳೀಯ ಪ್ರಾಧಿಕಾರವು ಅನುಮೋದನೆ ನೀಡಿದೆ ಎಂಬುದಾಗಿ ಭಾವಿಸತಕ್ಕದ್ದು."

The above translation of the Karnataka Town and Country Planning (Second Amendment) Act, 2020 (Karnataka Act 47 of 2020) shall be authoritative text in the Kannada language under section 5A of the Karnataka Official Language Act, 1963 (Karnataka Act 26 of 1963).

**ವಜುಬಾಯಿ ವಾಲ**
**ಕರ್ನಾಟಕ ರಾಜ್ಯಪಾಲರು**
ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕೆ. ದ್ವಾರಕನಾಥ್ ಬಾಬು)**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ
ಕರ್ನಾಟಕ ಸರ್ಕಾರ
ಬಹುಮಹಡಿಗಳ ಕಟ್ಟಡ, ಗೇಟ್-4
ಪಿ.ಬಿ. ನಂ. 5257
ಡಾ|| ಬಿ.ಆರ್.ಅಂಬೇಡ್ಕರ್ ವೀಧಿ
ಬೆಂಗಳೂರು-560 001
ದೂರವಾಣಿ ಸಂ.: 080-22258988

ಸಂಖ್ಯೆ: ನಗ್ರಾಯೋ:ಜಂನಿ:28:CIRC:2020-21
ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 36 ಶಾಸನ 2020,
ಬೆಂಗಳೂರು, ದಿನಾಂಕ:20-10-2020.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ,
ಬಹುಮಹಡಿಗಳ ಕಟ್ಟಡ, 4ನೇ ಹಂತ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು,
ದಿನಾಂಕಃ 29 OCT 2020

ಯಥಾ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

1. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ವಲಯ ಕಛೇರಿ, ಧಾರವಾಡ.
2. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ಕರ್ನಾಟಕ ರಾಜ್ಯ ನಗರ ಯೋಜನಾ ಮಂಡಳಿ, ಬೆಂಗಳೂರು.
3. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಬೆಂಗಳೂರು/ಮೈಸೂರು/ ಕಲಬುರಗಿ.
4. ಸದಸ್ಯ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು.
5. ಆಯುಕ್ತರು, ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
6. ಮುಖ್ಯಾಧಿಕಾರಿಗಳು/ಆಯುಕ್ತರು, ಪುರಸಭೆ/ನಗರಸಭೆ ಯೋಜನಾ ಪ್ರಾಧಿಕಾರಗಳು.
7. ಎಲ್ಲಾ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿಗಳಿಗೆ.
8. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿ ಹಾಗೂ ತಾಂತ್ರಿಕ ಸಿಬ್ಬಂದಿಗಳಿಗೆ.
9. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ.
10. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ತಾಂತ್ರಿಕ ವಿಭಾಗದ ಇ-ಮೇಲ್ ವಿಷಯ ನಿರ್ವಾಹಕರಿಗೆ.
11. ಹೆಚ್ಚುವರಿ ಪ್ರತಿಗಳು.

ನಗರ ಮತ್ತು ಗ್ರಾಮಾಂತರ ಯೋಜನಾ
ನಿರ್ದೇಶಕರ ಪರವಾಗಿ

O/c

ರವಾನಿಸಲಾಗಿದೆ

33 NK(Suma)Circ